ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 890 (1111)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ವಿಷಯ : ಜಲಾನಯನ ಅಭಿವೃದ್ಧಿ ಇಲಾಖೆಯು ಜಾರಿಗೊಳಿಸುತ್ತಿರುವ ಯೋಜನೆಗಳ ಬಗ್ಗೆ

(ಅ) ರಾಜ್ಯದ ಕೃಷಿ ಇಲಾಖೆಯಲ್ಲಿ ಬರುವ ಜಲಾನಯನ ಅಭಿವೃದ್ಧಿ ಇಲಾಖೆಯು ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು; ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಎಲ್ಲಾ ಜಿಲ್ಲೆಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗೆ ಮಂಜೂರಾದ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಕೇಂದ್ರ ಹಾಗೂ ರಾಜ್ಯದ ಪಾಲು ಎಷ್ಟು ; ಇದರಲ್ಲಿ ಕೇಂದ್ರ ಹಾಗೂ ರಾಜ್ಯದ ಪ್ರಮಾಣದಲ್ಲಿ ಇರುವ ವ್ಯತ್ಯಾಸವೆಷ್ಟು ; ಕೇಂದ್ರ ಸರ್ಕಾರದ ಪಾಲಿನ ಪ್ರಮಾಣ ಕಡಿಮೆಯಾಗಿದ್ದಲ್ಲಿ, ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುದಾನವನ್ನು ಯಾವ ರೀತಿ ಸರಿದೂಗಿಸಲಾಗಿದೆ ; ಇದರಿಂದ ರಾಜ್ಯ ಸರ್ಕಾರಕ್ಕೆ ಆದ ನಷ್ಟವೆಷ್ಟು ? (ಮಾಹಿತಿ ನೀಡುವುದು)